## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಖಾಸಗಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವರ್ಗದ ಯೋಜನೆಯ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಯ ಮಾರಾಟ ಮಾಡುವ ಸೌರ ಘಟಕದ ಯೋಜನೆಯಡಿಯಲ್ಲಿ ಸರ್ಕಾರದಿಂದ ಹೊರಡಿಸುವ ಹಂಚಿಕೆಯ ಆದೇಶಗಳಲ್ಲಿ ಸಂಸ್ಕರಣಾ ಶುಲ್ಕ (Facilitation Fee) ಮತ್ತು ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಕಡ್ಡಾಯವಾಗಿ ಪಾವತಿಸುವ ಷರತ್ತು ವಿಧಿಸುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ : ಕೆ.ಆರ್.ಇ.ಡಿ.ಎಲ್/07/ಎಸ್‌ಜಿ/2017/1315 ದಿನಾಂಕ : 16.02.2017.

872 15/03/17

* * *

**ಪ್ರಸ್ತಾವನೆ :-**

ಖಾಸಗಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವರ್ಗದ ಯೋಜನೆಯ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಯ ಮಾರಾಟ ಮಾಡುವ ಸೌರ ಘಟಕದ ಯೋಜನೆಯಡಿಯಲ್ಲಿ ಸರ್ಕಾರದಿಂದ ಹೊರಡಿಸುವ ಹಂಚಿಕೆಯ ಆದೇಶಗಳಲ್ಲಿ ಈ ಕೆಳಗಿನ ಷರತ್ತನ್ನು ಅಳವಡಿಸಲು ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಕೋರಿಕೆ ಸಲ್ಲಿಸಿರುತ್ತಾರೆ.

> 'ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು, ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು'.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 68 ಎನ್‌ಸಿಇ 2017**
**ಬೆಂಗಳೂರು, ದಿನಾಂಕ: 09.03.2017.**

MD KREDL

GM (Mech) I/C KREDL

ಖಾಸಗಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವರ್ಗದ ಯೋಜನೆಯ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಯ ಮಾರಾಟ ಮಾಡುವ ಸೌರ ಘಟಕದ ಯೋಜನೆಯಡಿಯಲ್ಲಿ ಸರ್ಕಾರದಿಂದ ಹೊರಡಿಸುವ ಹಂಚಿಕೆಯ ಆದೇಶಗಳಲ್ಲಿ ಪ್ರಸ್ತುತ ವಿಧಿಸಲಾಗುತ್ತಿರುವ ಷರತ್ತುಗಳೊಂದಿಗೆ ಈ ಕೆಳಗಿನ ಷರತ್ತುಗಳನ್ನು ಅಳವಡಿಸಿಕೊಳ್ಳಲಾಗಿದೆ.

I. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು, ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;

Pl. put up accordingly
TO-SG
17/3/17

....2)

2. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;

3. ಈಗಾಗಲೇ ಸದರಿ ವರ್ಗದಡಿ ಹಂಚಿಕೆಯಾಗಿರುವ ಸೌರ ವಿದ್ಯುತ್ ಉತ್ಪಾದನಾ ಯೋಜನೆಯ ಅಭಿವೃದ್ಧಿದಾರರು ಸದರಿ ಷರತ್ತನ್ನು ಪಾಲಿಸದೇ ಇದ್ದಲ್ಲಿ, ಅಂತಹ ಅಭಿವೃದ್ಧಿದಾರರಿಗೆ ಒಂದು ತಿಂಗಳ ಅವಧಿಯೊಳಗೆ ಅನ್ವಯವಾಗುವಂತಹ ಸಂಸ್ಕರಣಾ ಶುಲ್ಕವನ್ನು ಪಾವತಿಸಬೇಕೆಂದು ಹಾಗೂ 45 ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು; ಇಲ್ಲವಾದಲ್ಲಿ ಅಭಿವೃದ್ಧಿದಾರರಿಗೆ ಹಂಚಿಕೆಯಾಗಿರುವ ಹಂಚಿಕೆ ಆದೇಶವು ತಂತಾನೇ ರದ್ದಾಗುವುದು.

ಮುಂದುವರೆದು, ಈಗಾಗಲೇ ಖಾಸಗಿ/ಸ್ವತಂತ್ರ ವಿದ್ಯುತ್ ಉತ್ಪಾದಕರ ವರ್ಗದ ಯೋಜನೆಯ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಯ ಮಾರಾಟ ಮಾಡುವ ಸೌರ ಘಟಕದ ಯೋಜನೆಯ ವರ್ಗದಡಿ ಹಂಚಿಕೆ ಆದೇಶವನ್ನು/ನಿರಾಕ್ಷೇಪಣಾ ಪತ್ರವನ್ನು ಪಡೆದಿರುವ ಅಭಿವೃದ್ಧಿದಾರರಿಗೆ ಈ ಆದೇಶವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಜಾರಿಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
8. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
9. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.